ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಸರಕಾರಿ ಐ.ಟಿ.ಐ ಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸುವ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ(ಶಿಕ್ಷಕರ ಕ್ಷೇತ್ರ) –

13 (103) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ) ಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಎಷ್ಟು ಜನ ಕೆಲಸ ನಿರ್ವಹಿಸುತ್ತಿದ್ದಾರೆ; (ಅವರ ಹೆಸರು ಮತ್ತು ಕೆಲಸ ನಿರ್ವಹಿಸುತ್ತಿರುವ ಸಂಸ್ಥೆಯ ಹೆಸರು ಹಾಗೂ ಅವರು ಅತಿಥಿ ಉಪನ್ಯಾಸಕರಾಗಿ ಯಾವ ದಿನಾಂಕದಿಂದ ಕೆಲಸ ನಿರ್ವಹಿಸುತ್ತಿದ್ದಾರೆ ಎಂಬ ಬಗ್ಗೆ ಸಂಸ್ಥೆವಾರು, ತಾಲ್ಲೂಕುವಾರು, ಮತ್ತು ಜಿಲ್ಲಾವಾರು ಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ 15-20 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಇವರನ್ನು ಖಾಯಂ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಇ) ಇಷ್ಟು ವರ್ಷ ಕೆಲಸ ಮಾಡಿ ಅನುಭವ ಹೊಂದಿದ ಇವರ ಅನುಭವವನ್ನು ಪರಿಗಣಿಸಿ ಸರ್ಕಾರ ತಕ್ಷಣ ಇವರನ್ನು ಖಾಯಂ ಮಾಡಲು ಸರ್ಕಾರಕ್ಕೆ ಇರುವ ತೊಂದರೆ ಏನು?